ಶ್ರೀ ಜಗದೀಶ್ ಶೆಟ್ಟರ್:– ಇಲ್ಲಿ ಗೋವಿನ ರಕ್ಷಣೆ ಅಲ್ಲ, ಗೋವಿನ ಹತ್ಯೆ ನಡೆಯುತ್ತಿದೆ.

(ಸದನದ ಬಾವಿಯಲ್ಲಿದ್ದ ಸದಸ್ಯರು 'ಗೋಹತ್ಯೆಯನ್ನು ಪ್ರೋತ್ಸಾಹಿಸುತ್ತಿರುವ ಸರ್ಕಾರಕ್ಕೆ ಧಿಕ್ಕಾರ' ಎಂದು ಕೂಗುತ್ತಿದ್ದರು)

ವಿಧೇಯಕವನ್ನು ಹಿಂದಕ್ಕೆ ಪಡೆಯುವುದು

2. ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕ, 2012

ಅಧ್ಯಕ್ಷರು:– 2012ನೇ ಸಾಲಿನ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಹಿಂದಕ್ಕೆ ಪಡೆಯಲು ಅನುಮತಿ ನೀಡಬೇಕೆಂದು ಕೋರುವುದು.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ,

2012ನೇ ಸಾಲಿನ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುತ್ತೇನೆ.

(ಸದನದ ಬಾವಿಯಲ್ಲಿದ್ದ ಬಿ.ಜೆ.ಪಿ.ಸದಸ್ಯರು 'ಭ್ರಷ್ಟರಿಗಿದೆ ಮನ್ನಣೆ, ಗೋವಿಗಿಲ್ಲ ರಕ್ಷಣೆ' ಎಂಬ ಭಿತ್ತಿಪತ್ರವನ್ನು ಪ್ರದರ್ಶಿಸುತ್ತಾ ಕೂಗುತ್ತಿದ್ದರು)

ಶ್ರೀ ಜಗದೀಶ್ ಶೆಟ್ಟರ್:– ಇವರೆಲ್ಲಾ ಗೋಭಕ್ಷಕರು

ಅಧ್ಯಕ್ಷರು:– ಪ್ರಸ್ತಾವನೆ ಹೀಗಿದೆ,

2012ನೇ ಸಾಲಿನ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಹಿಂದಕ್ಕೆ ಪಡೆಯಲು ಅನುಮತಿ ನೀಡುವುದು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಹಿಂದಕ್ಕೆ ಪಡೆಯಲಾಗಿದೆ.

(ಗೊಂದಲ)

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ವಿರೋಧ ಪಕ್ಷದ ನಾಯಕರು):– ಮಾನ್ಯ ಅಧ್ಯಕ್ಷರೆ, ಇವರು ಗೋ ಸಂಪತ್ತನ್ನು ರಕ್ಷಣೆ ಮಾಡಬೇಕು, ಅದು ಬಿಟ್ಟು ಬಿಲ್ ಅನ್ನು ವಾಪಸ್ಸು ತೆಗೆದುಕೊಳ್ಳುತ್ತಿದ್ದಾರೆ. ಇವರಿಗೆ ಕೇವಲ ಓಟು ರಾಜಕಾರಣ ಬೇಕು. ಗೋರಕ್ಷಣೆ ಮಾಡಬೇಕು, ಗೋ ಸಂಪತ್ತನ್ನು ಉಳಿಸಬೇಕು ಅದು ಬಿಟ್ಟು ಏನಿದು? ಇವರು ಗೋಮುಖ ವ್ಯಾಘ್ರರು, ಬಿಲ್ ವಾಪಸ್ ತೆಗೆದುಕೊಂಡರು.

(ಗೊಂದಲ)

ಅಧ್ಯಕ್ಷರು:– ನಾನು ವಿನಯದಿಂದ ಪ್ರಾರ್ಥನೆ ಮಾಡಿಕೊಳ್ಳುತ್ತೇನೆ, ದಯವಿಟ್ಟು ತಮ್ಮ ಸೀಟಿಗೆ ಹೋಗಿ, ಚರ್ಚೆಗೆ ಅವಕಾಶ ಮಾಡಿಕೊಡಿ. ಏಕೆಂದರೆ, ನಾವು ಕೆಲವು ಪ್ರಮುಖವಾದಂಥ ವಿಷಯಗಳನ್ನು ನಿಯಮ 69ರ ಅಡಿಯಲ್ಲಿ ಚರ್ಚೆಗೆ ಪಡೆದಿದ್ದೇವೆ. ಆ ವಿಷಯಗಳ ಬಗ್ಗೆ ಅನೇಕ ಜನ ನಮ್ಮ ಮಾನ್ಯ ಶಾಸಕರು, ನನ್ನನ್ನೂ ಸೇರಿ ಆ ವಿಷಯಗಳು ಚರ್ಚೆಯಾಗಬೇಕೆಂದು ಜಾತಕ ಪಕ್ಷಿಗಳಂತೆ ಕಾದು ಕುಳಿತಿದ್ದೇವೆ. ಅದಕ್ಕೆ ಆ ವಿಷಯಗಳು ಚರ್ಚೆಯಾದರೆ ನಮ್ಮ ಕರ್ನಾಟಕ ರಾಜ್ಯದ ಅನೇಕ ಸಮಸ್ಯೆಗಳಿಗೆ ಸಹಾಯವಾಗುತ್ತದೆ. ದಯವಿಟ್ಟು ನಿಯಮ 69ರ ವಿಷಯಗಳ ಚರ್ಚೆಗೆ

ಅವಕಾಶ ಕೊಡುವುದಕ್ಕೆ ತಾವೆಲ್ಲ ತಮ್ಮ ಸ್ಥಾನಗಳಿಗೆ ಹೋಗಬೇಕೆಂದು ನಾನು ವಿನಯಪೂರ್ವಕವಾಗಿ ಪ್ರಾರ್ಥನೆ ಮಾಡಿಕೊಳ್ಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್:– ಮಾನ್ಯ ಅಧ್ಯಕ್ಷರೆ, ತಮ್ಮ ರೂಲಿಂಗ್ ಅನ್ನು ವಾಪಸ್ಸು ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ. ಚರ್ಚೆ ಮಾಡುವುದಿದೆ, ದಯವಿಟ್ಟು ಆ ರೂಲಿಂಗ್ ಅನ್ನು ವಾಪಸ್ಸು ತೆಗೆದುಕೊಳ್ಳಿ, ಭ್ರಷ್ಟ ಸಚಿವರು ಇಲ್ಲಿದ್ದಾರೆ, ಅವರ ಬಗ್ಗೆ ಇಲ್ಲಿ ಚರ್ಚೆ ಮಾಡುವುದಕ್ಕೆ ದಯವಿಟ್ಟು ಅವಕಾಶ ಮಾಡಿಕೊಡಿ.

(ಗೊಂದಲ)

(ಸದನದ ಬಾವಿಯಲ್ಲಿರುವ ಬಿ.ಜೆ.ಪಿ ಸದಸ್ಯರು 'ಭ್ರಷ್ಟಾಚಾರಿಗಳಿಗೆ ರಕ್ಷಣೆ ಕೊಡುತ್ತಿರುವ ಸರ್ಕಾರಕ್ಕೆ ಧಿಕ್ಕಾರ' ಎಂದು ಕೂಗುತ್ತಿದ್ದರು)

ಶ್ರೀ ಎನ್.ಹೆಚ್. ಕೋನರೆಡ್ಡಿ:– ಸದನ ನಡೆಯಲು ಅವಕಾಶ ಕೊಡಿ.

(ಗೊಂದಲ)

ಅಧ್ಯಕ್ಷರು:– ಈಗ ಸದನವನ್ನು 10 ನಿಮಿಷಗಳ ಕಾಲ ಮುಂದಕ್ಕೆ ಹಾಕಿ ಪುನಃ ಸೇರುವುದು.

(ಸದನವನ್ನು 10 ನಿಮಿಷಗಳ ಕಾಲ ಮುಂದೂಡಲಾಯಿತು)

(ಸದನವು ಪುನಃ ಬೆಳಿಗ್ಗೆ 10–56 ಗಂಟೆಗೆ ಸಮಾವೇಶಗೊಂಡಿತು)

(ಸನ್ಮಾನ್ಯ ಸಭಾಧ್ಯಕ್ಷರು ಪೀಠವನ್ನಲಂಕರಿಸಿದರು)

(ಬಿಜೆಪಿ ಸದಸ್ಯರು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)

ಶ್ರೀ ಎನ್.ಹೆಚ್. ಕೋನರೆಡ್ಡಿ:– ಮಾನ್ಯ ಸಭಾಧ್ಯಕ್ಷರೆ, ದಯವಿಟ್ಟು, ಸದನ ನಡೆಯಲಿಕ್ಕೆ ಅವಕಾಶ ಕೊಡಿ.

(ಗೊಂದಲ)

ಶ್ರೀ ಎನ್.ಹೆಚ್. ಕೋನರೆಡ್ಡಿ:– ಉತ್ತರ ಕರ್ನಾಟಕದ ಸಮಸ್ಯೆಗಳ ....

(ಗೊಂದಲ)

ಅಧ್ಯಕ್ಷರು:– ದಯವಿಟ್ಟು, ನಾನು ಪ್ರಾರ್ಥನೆ ಮಾಡಿಕೊಳ್ಳುತ್ತೇನೆ. ನಿಮ್ಮ ನಿಮ್ಮ ಸ್ಥಾನಗಳಿಗೆ ಹೋಗಿ ಕುಳಿತುಕೊಳ್ಳಿ. ಚರ್ಚೆ ಮಾಡೋಣ.

(ಗೊಂದಲ)

ಶ್ರೀ ಎನ್.ಹೆಚ್. ಕೋನರೆಡ್ಡಿ:– ಸಾರ್, ಸದನ ನಡೆಯಲಿ.

(ಗೊಂದಲ)

ಅಧ್ಯಕ್ಷರು:– ನೀವು ಅಲ್ಲಿ ಕುಳಿತಿದ್ದರೆ ಆಗಿಹೋಗುತ್ತಿತ್ತಲ್ಲ.

(ಗೊಂದಲ)

ಅಧ್ಯಕ್ಷರು:– ನೀವು ತಯಾರಿದ್ದೀರಾ?

(ಗೊಂದಲ)

ಅಧ್ಯಕ್ಷರು:– ದಯವಿಟ್ಟು, ...

(ಗೊಂದಲ)

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು) (ತಮ್ಮ ಸ್ಥಾನದಿಂದ):– ಮಾನ್ಯ ಅಧ್ಯಕ್ಷರೆ, ...

(ಗೊಂದಲ)

ಅಧ್ಯಕ್ಷರು:– ಮಾನ್ಯ ಸದಸ್ಯರೆ,

(ಗೊಂದಲ)

ಶ್ರೀ ಜಗದೀಶ್ ಶೆಟ್ಟರ್:– ಮಠಗಳ . . . .

(ಗೊಂದಲ)